**ದಿನಾಂಕ　04-07-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲು - 2 ನೇ ಎದುರುದಾರರ ಪರ ಎಂ ರೈ ವಕೀಲರಿಂದಃ**

ಅಪಘಾತದ ಸಂದರ್ಭದಲ್ಲಿ ನಾನು ಸ್ಥಳದಲ್ಲಿ ಇರಲಿಲ್ಲ. ಅಪಘಾತದ ಸಮಯದಲ್ಲಿ ನನ್ನ ಮಗ ಪೃದ್ವಿಕ್ 8 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದ. ನನ್ನ ಮಗ 8 ನೇ ತರಗತಿ ಉತ್ತೀರ್ಣವಾಗಿ 9 ನೇ ತರಗತಿಗೆ ಹೋಗಿರುತ್ತಾನೆ. ನಾನು ನ್ಯಾಯಾಲಯಕ್ಕೆ ಹಾಜರು ಪಡಿಸಿರುವ ದಾಖಲೆಗಳ ಬಗ್ಗೆ ನನ್ನ ತಕಾರರು ಇಲ್ಲ. ನನ್ನ ಮಗನಿಗೆ ಸಾದ ಗಾಯವಾಗಿದ್ದರಿಂದ ನಿಪಿ 9 ರಲ್ಲಿ ಹೇಳಿದಷ್ಟು ಹಣ ಖರ್ಚು ಮಾಡಿಲ್ಲ ಎಂದರೆ ಸರಿಯಲ್ಲ. ಅಪಘಾತ ನನ್ನ ಮಗ ಹೋಗುತ್ತಿದ್ದ ವಾಹನದ ಚಾಲಕನ ತಪ್ಪಿ ನಿಂದ ಆಗಿದ್ದರಿಂದ 2 ನೇ ಎದುರುದಾರರು ಪರಿಹಾರವನ್ನು ಕೊಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ.

ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಹೇಳಿರುವಂತೆ ವೈದ್ಯಕೀಯ ಖರ್ಚು, ಪೌಷ್ಟಿಕ ಆಹಾರಕ್ಕೆ, ಓಡಾಟಕ್ಕೆ, ಪರಿಚಾರಕರಿಗೆ ಖರ್ಚಾಗಿಲ್ಲ ಎಂದರೆ ಸರಿಯಲ್ಲ. ಅಪಘಾತದಿಂದ ನನ್ನ ಮಗನಿಗೆ ವಿದ್ಯಾಭ್ಯಾಸಕ್ಕೆ ಯಾವುದೇ ತೊಂದರೆಯಾಗಿಲ್ಲ ಎಂದರೆ ಸರಿ. ನನ್ನ ಮಗನಿಗೆ ಯಾವುದೇ ಆದಾಯ ಇರಲಿಲ್ಲ ಎಂದರೆ ಸರಿ. ನನ್ನ ಮಗ ಈಗ ಚೆನ್ನಾಗಿ ಇದ್ದಾನೆ. ಹೆಚ್ಚಿನ ಪರಿಹಾರಕ್ಕಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ - ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ಮೂಲಕ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸ ಇದೆ ಎಂದು ಒಪ್ಪಿದರು

ಪ್ರ. ಹಿ. ಸಿ. ನ್ಯಾ. ಉಡುಪಿ.